## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿ ಬೆಂಗಳೂರಿಗೆ ತಾತ್ಕಾಲಿಕವಾಗಿ ಹೆಚ್ಚುವರಿಯಾಗಿ ಅಪರ ನಿಬಂಧಕರು(ವಿಚಾರಣೆಗಳು) ಮತ್ತು ಸಹಾಯಕ ಸಿಬ್ಬಂದಿ ಹುದ್ದೆಗಳನ್ನು ಸೃಜಿಸುವ ಬಗ್ಗೆ.

*****

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕಲೋ/ಸಿಬ್ಬಂದಿ(1)/61/2010-2011, ದಿನಾಂಕ: 12.04.2017.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಇಲಾಖಾ ವಿಚಾರಣೆಗಳನ್ನು ನಡೆಸಲು ಗೌರವಾನ್ವಿತ ಲೋಕಾಯುಕ್ತರು/ಉಪಲೋಕಾಯುಕ್ತರು ಅಪರ ನಿಬಂಧಕರು (ವಿಚಾರಣೆಗಳು) ಹುದ್ದೆಗಳಲ್ಲಿರುವ ಅಧಿಕಾರಿಗಳನ್ನು ವಿಚಾರಣಾಧಿಕಾರಿಗಳನ್ನಾಗಿ ನಾಮ ನಿರ್ದೇಶನ ಮಾಡುತ್ತಾರೆಂದು ತಿಳಿಸುತ್ತಾ, ಗೌರವಾನ್ವಿತ ಲೋಕಾಯುಕ್ತರು/ ಉಪಲೋಕಾಯುಕ್ತರುಗಳ ಆದೇಶದಂತೆ, ಕರ್ನಾಟಕ ಲೋಕಾಯುಕ್ತ ಅಧಿನಿಯಮ, 1984ರ ಅಡಿಯಲ್ಲಿ ದಾಖಲಾಗುವ ಪ್ರಕರಣಗಳಲ್ಲಿ ಪರಿಶೀಲನೆಯ ಕಾರ್ಯಗಳನ್ನು ಸಹ ಅಪರ ನಿಬಂಧಕರುಗಳು ನಿರ್ವಹಿಸುತ್ತಿದ್ದಾರೆಂದು ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ತಿಳಿಸಿರುತ್ತಾರೆ. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಪ್ರಸ್ತುತ 3034 ಇಲಾಖಾ ವಿಚಾರಣೆಗಳು ಪ್ರಕರಣಗಳು ಬಾಕಿ ಇದ್ದು, 880 ಪ್ರಕರಣಗಳಲ್ಲಿ ಕರ್ನಾಟಕ ಲೋಕಾಯುಕ್ತ ಅಧಿನಿಯಮ, 1984ರ ಕಲಂ 12(3)ರಡಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲಾಗಿದ್ದು, ಈ 880 ಪ್ರಕರಣಗಳನ್ನು ಸರ್ಕಾರವು ಇಲಾಖಾ ವಿಚಾರಣೆಗಾಗಿ ಸಂಸ್ಥೆಗೆ ವಹಿಸಿದಲ್ಲಿ, ಇಲಾಖಾ ವಿಚಾರಣೆ ಪ್ರಕರಣಗಳ ಸಂಖ್ಯೆಯು 3900 ದಾಟುವ ಸಾಧ್ಯತೆ ಇರುತ್ತದೆ. ಪ್ರಸಕ್ತ ವರ್ಷ 2017ರ ಮಾರ್ಚ್ ಅಂತ್ಯಕ್ಕೆ ಒಟ್ಟು ದೂರುಗಳ ಸಂಖ್ಯೆ 841 ಇದ್ದು, ವರ್ಷದ ಕೊನೆಯಲ್ಲಿ ಸುಮಾರು 3,200ನ್ನು ದಾಟುವ ಸಾಧ್ಯತೆಗಳಿವೆ ಎಂದು ನಿಬಂಧಕರು ವಿವರಿಸಿರುತ್ತಾರೆ.

ಅಲ್ಲದೇ, ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಕರಣಗಳಿಗೆ ಸಂಬಂಧಪಟ್ಟಂತೆ, ವಿವಿಧ ನ್ಯಾಯಾಲಯಗಳಲ್ಲಿ ಸಂಬಂಧಿತ ಸರ್ಕಾರಿ ನೌಕರರು ಪ್ರಕರಣಗಳನ್ನು ಹೂಡುತ್ತಿದ್ದು, ಪ್ರಸ್ತುತ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ: 1727ಎಂದು ವರದಿ ಮಾಡಿರುತ್ತಾರೆ.

ಪ್ರಸ್ತುತ, ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಒಟ್ಟು 11 ಅಪರ ನಿಬಂಧಕರು (ವಿಚಾರಣೆಗಳು) ಅಸ್ತಿತ್ವದಲ್ಲಿದ್ದು, ದೂರು ಹಾಗೂ ಇಲಾಖಾ ವಿಚಾರಣೆಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ಸದರಿ ಅಧಿಕಾರಿಗಳ ಮೇಲೆ ತೀವ್ರವಾದ ಕೆಲಸದ ಒತ್ತಡ ಇರುವುದರಿಂದ ಪ್ರಕರಣಗಳ ತ್ವರಿತ ವಿಲೇವಾರಿ ವಿಳಂಬವಾಗುತ್ತಿರುವುದಾಗಿಯೂ, ಪ್ರಕರಣಗಳ ತ್ವರಿತ ವಿಲೇವಾರಿಗೆ ಹೆಚ್ಚುವರಿಯಾಗಿ 09 ಅಪರ ನಿಬಂಧಕರು(ವಿಚಾರಣೆ) ಹುದ್ದೆಗಳನ್ನು ಈ ಕೆಳಕಂಡ ಸಹಾಯಕ ಸಿಬ್ಬಂದಿಯೊಂದಿಗೆ ತಾತ್ಕಾಲಿಕವಾಗಿ ಕನಿಷ್ಠ 4 ವರ್ಷಗಳವರೆಗೆ ಸೃಜಿಸುವ ಅವಶ್ಯಕತೆ ಇರುವುದಾಗಿ ಮೇಲೆ ಓದಲಾದ ಪತ್ರದಲ್ಲಿ ಗೌರವಾನ್ವಿತ ಲೋಕಾಯುಕ್ತರವರ ನಿರ್ದೇಶನದ ಮೇರೆಗೆ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

---- 2 -)

ಈ ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 72 ಸೇಲೋಯು 2017**
**ಬೆಂಗಳೂರು, ದಿನಾಂಕ:26.12.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾದ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಗೊಳಿಸಲು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಗೆ ಈ ಕೆಳಕಂಡ 20 ಹುದ್ದೆಗಳನ್ನು ದಿನಾಂಕ:31.03.2019ರವರೆಗೆ ಮಾತ್ರ ತಾತ್ಕಾಲಿಕವಾಗಿ ಸೃಜಿಸಲಾಗಿದೆ.

| ಕ್ರ ಸಂ. | ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ |
|---|---|---|
| 1. | ಅಪರ ನಿಬಂಧಕರು(ವಿಚಾರಣೆಗಳು) | 05 |
| 2. | ತೀರ್ಪು ಬರಹಗಾರರು | 05 |
| 3. | ಪ್ರಥಮ ದರ್ಜೆ ಸಹಾಯಕರು | 05 |
| 4. | ದಲಾಯತ್(ಗ್ರೂಪ್-ಡಿ) | 05 |
| | ಒಟ್ಟು | 20 |

27 DEC 2017

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 1140 ವೆಚ್ಚ-12/2017, ದಿನಾಂಕ:16.12.2017ರ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

17206 / 18
29/12/17

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೇಮಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜಾಗೃತ ವಿಭಾಗ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ & ಎಸ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಶಾಖಾಧಿಕಾರಿ, ಆರ್ಥಿಕ ಇಲಾಖೆ(ವೆಚ್ಚ-12), ವಿಧಾನಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.